All India Radio: Bangalore
National Bulletin In Kannada
07.04.2025  07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**<><><><>**

ಮುಖ್ಯಾಂಶಗಳು

- ಪೋರ್ಚುಗಲ್ ಮತ್ತು ಸ್ಲೋವಾಕಿಯಾ ಪ್ರವಾಸ ಕೈಗೊಂಡಿರುವ - ರಾಷ್ಟ್ರಪತಿ ದ್ರೌಪದಿ ಮುರ್ಮು
- "ಆರೋಗ್ಯಕರ ಆರಂಭಗಳು, ಭರವಸೆಯ ಭವಿಷ್ಯ" ಧ್ಯೇಯದೊಂದಿಗೆ ಇಂದು ವಿಶ್ವ ಆರೋಗ್ಯ ದಿನ ಆಚರಣೆ
- ಥಾಯ್ಲೆಂಡ್ ಮತ್ತು ಶ್ರೀಲಂಕಾ ಯಶಸ್ವಿ ಪ್ರವಾಸ ಮುಗಿಸಿ ದೆಹಲಿಗೆ ಹಿಂತಿರುಗಿದ ಪ್ರಧಾನಿ ನರೇಂದ್ರ ಮೋದಿ
- ಐಪಿಎಲ್ ಟಿ-೨೦ ಕ್ರಿಕೆಟ್ ; ಸನ್ ರೈಸರ್ಸ್ ಹೈದರಾಬಾದ್ ವಿರುದ್ಧ ೭ ವಿಕೆಟ್‌ಗಳಿಂದ ಜಯಗಳಿಸಿದ ಗುಜರಾತ್ ಟೈಟಾನ್ಸ್

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಪೋರ್ಚುಗಲ್ ಮತ್ತು ಸ್ಲೋವಾಕಿಯಾ ಪ್ರವಾಸದ ಭಾಗವಾಗಿ, ಮೊದಲ ಚರಣದಲ್ಲಿ ಇಂದು ಬೆಳಿಗ್ಗೆ ಲಿಸ್ಬನ್‌ಗೆ ಆಗಮಿಸಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ತಮ್ಮ ಪೋರ್ಚುಗಲ್ ಸಹವರ್ತಿ ಮಾರ್ಸೆಲೊ ರೆಬೆಲೊ ಡಿ ಸೌಸಾ ಅವರೊಂದಿಗೆ ನಿಯೋಗ ಮಟ್ಟದ ಮಾತುಕತೆ ನಡೆಸಲಿದ್ದಾರೆ.  ಪ್ರಧಾನಿ ಲೂಯಿಸ್ ಮಾಂಟೆನೆಗ್ರೊ ಮತ್ತು ಸಂಸತ್ತಿನ ಸ್ಪೀಕರ್ ಜೋಸ್ ಪೆಡ್ರೊ ಅಗುಯರ್ ಬ್ರಾಂಕೊ ಅವರನ್ನು ಸಹ ರಾಷ್ಟ್ರಪತಿ ಭೇಟಿ ಮಾಡಲಿದ್ದಾರೆ. ಲಿಸ್ಬನ್ ಮೇಯರ್, ರಾಷ್ಟ್ರಪತಿ ಅವರ ಗೌರವಾರ್ಥ ವಿಶೇಷ ಕಾರ್ಯಕ್ರಮ ಆಯೋಜಿಸಲಿದ್ದಾರೆ. ಬಳಿಕ ರಾಷ್ಟ್ರಪತಿ ಪೋರ್ಚುಗಲ್‌ನಲ್ಲಿರುವ ಭಾರತೀಯ ಸಮುದಾಯದ ಸದಸ್ಯರನ್ನು ಭೇಟಿ ಮಾಡಲಿದ್ದಾರೆ. ಅಲ್ಲದೇ ಅವರು, ವಿವಿಧ ವಿಶ್ವವಿದ್ಯಾಲಯಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ ಕೆಲವು ಭಾರತೀಯ ಸಂಶೋಧಕರನ್ನು ಭೇಟಿ ಮಾಡುವ ಸಾಧ್ಯತೆಯಿದೆ.

‘ಭಾರತ ಮತ್ತು ಪೋರ್ಚುಗಲ್, ರಾಜತಾಂತ್ರಿಕ ಸಂಬಂಧಗಳ ಮರುಸ್ಥಾಪನೆಯ ೫೦ ವರ್ಷಗಳನ್ನು ಆಚರಿಸುತ್ತಿರುವ ಸಮಯದಲ್ಲಿ ರಾಷ್ಟ್ರಪತಿ ಅವರ ಈ ಭೇಟಿ ಮಹತ್ವ ಪಡೆದಿದೆ. ಇದೇ ವೇಳೆ ಅವರು, ಭಾರತ ಮತ್ತು ಪೋರ್ಚುಗಲ್‌ನ ಕಲಾತ್ಮಕ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಪ್ರದರ್ಶಿಸುವ ಸ್ಮರಣಾರ್ಥ ಅಂಚೆಚೀಟಿಯನ್ನು ಸಹ ಬಿಡುಗಡೆ ಮಾಡಲಿದ್ದಾರೆ.

<><><><>

ಆರೋಗ್ಯದ ಕುರಿತು ಜಾಗೃತಿ ಮೂಡಿಸಲು ಇಂದು ಜಗತ್ತಿನಾದ್ಯಂತ ವಿಶ್ವ ಆರೋಗ್ಯ ದಿನವನ್ನು ಆಚರಿಸಲಾಗುತ್ತದೆ.  ಈ ದಿನದಂದು ಪ್ರಪಂಚದಾದ್ಯಂತದ ಜನರಿಗೆ, ಆರೋಗ್ಯ ಕಾಳಜಿಯ ವಿಷಯದತ್ತ ಗಮನ ಸೆಳೆಯಲಾಗುವುದು. ಏಪ್ರಿಲ್ ೭ ರಂದು, ವಿಶ್ವ ಆರೋಗ್ಯ ಸಂಸ್ಥೆ ಸ್ಥಾಪನೆಯ ವಾರ್ಷಿಕೋತ್ಸವವಾಗಿದ್ದು, ‘ಆರೋಗ್ಯಕರ ಆರಂಭಗಳು, ಭರವಸೆಯ ಭವಿಷ್ಯ" ಎಂಬುದು ಈ ವರ್ಷದ ವಿಶ್ವ ಆರೋಗ್ಯ ದಿನದ ಘೋಷವಾಕ್ಯವಾಗಿದೆ. ರೋಗಗಳು, ಮಾನಸಿಕ ಆರೋಗ್ಯದ ಸವಾಲುಗಳು ಮತ್ತು ಅವುಗಳನ್ನು ತಡೆಗಟ್ಟುವ, ಆರೈಕೆಯ ಮಹತ್ವದ ಬಗ್ಗೆ, ಹೆಚ್ಚುತ್ತಿರುವ ಜಾಗೃತಿಯೊಂದಿಗೆ, ಪ್ರಪಂಚದಾದ್ಯಂತ, ಆರೋಗ್ಯ, ಪ್ರಮುಖ ಆದ್ಯತೆಯಾಗಿ ಹೊರಹೊಮ್ಮಿದೆ. ಪ್ರತಿ ವರ್ಷ, ವಿಶ್ವ ಆರೋಗ್ಯ ಸಂಸ್ಥೆ, ವಿಶ್ವ ಆರೋಗ್ಯ ದಿನಕ್ಕೆ ಒಂದು ನಿರ್ದಿಷ್ಟ ವಿಷಯವನ್ನು ಘೋಷಿಸುತ್ತದೆ. ಸಂಸ್ಥೆಯ ಸ್ಥಾಪನೆಯನ್ನು ಗುರುತಿಸಲು ಮತ್ತು ಆರೋಗ್ಯದ ಮಹತ್ವದ ಕುರಿತು ಜಾಗತಿಕ ಗಮನವನ್ನು ಸೆಳೆಯಲು, ವಿಶ್ವ ಆರೋಗ್ಯ ಸಂಸ್ಥೆ, ೧೯೫೦ ರಲ್ಲಿ ವಿಶ್ವ ಆರೋಗ್ಯ ದಿನವನ್ನು ಮೊದಲ ಬಾರಿಗೆ ಆಚರಿಸಿತು.

<><><><>

ಆರೋಗ್ಯ ಮತ್ತು ಉತ್ತಮ ಆರೋಗ್ಯ ಪದ್ಧತಿಗಳ ಬಗ್ಗೆ ಜಾಗೃತಿ ಮೂಡಿಸಲು ಇಂದು ವಿಶ್ವ ಆರೋಗ್ಯ ದಿನವನ್ನು ಆಚರಿಸಲಾಗುತ್ತಿದೆ.  ತಾಯಂದಿರು ಮತ್ತು ನವಜಾತ ಶಿಶುಗಳ ಸಾವುಗಳನ್ನು ಕೊನೆಗೊಳಿಸಲು ಮತ್ತು ಮಹಿಳೆಯರ ದೀರ್ಘಕಾಲೀನ ಆರೋಗ್ಯ ಮತ್ತು ಯೋಗಕ್ಷೇಮಕ್ಕೆ ಆದ್ಯತೆ ನೀಡಲು ಗಮನ ನೀಡಲಾಗುತ್ತಿದೆ.

ಈ ಕುರಿತು ಒಂದು ವರದಿ : ಹೇಮಂತ್ (೫೦ ಸೆಕೆಂಡ್‌ಗಳು)

ದೇಶದಲ್ಲಿ ಆರೋಗ್ಯ ಮೂಲಸೌಕರ್ಯವನ್ನು ಬಲಪಡಿಸುವ ಮೂಲಕ, ಜನರಿಗೆ ಗುಣಮಟ್ಟದ ಆರೋಗ್ಯ ಸೌಲಭ್ಯಗಳನ್ನು ಒದಗಿಸಲು ಕೇಂದ್ರ ಸರ್ಕಾರ ಶ್ರಮಿಸುತ್ತಿದೆ.

ಜನರಿಗೆ ಗುಣಮಟ್ಟದ ಮತ್ತು ಕೈಗೆಟುಕುವ ಆರೋಗ್ಯ ಸೇವೆಗಳನ್ನು ಒದಗಿಸಲು ಹಾಗೂ ಆರೋಗ್ಯಕರ ರಾಷ್ಟ್ರ ನಿರ್ಮಿಸುವತ್ತ ಸಾಗಲು ಕೇಂದ್ರ ಸರ್ಕಾರ ಹಲವಾರು ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ. ಈ ನಿಟ್ಟಿನಲ್ಲಿ, ಆಯುಷ್ಮಾನ್ ಭಾರತ್, ರಾಷ್ಟ್ರೀಯ ಕ್ಷಯರೋಗ ನಿರ್ಮೂಲನ ಕಾರ್ಯಕ್ರಮ ಮತ್ತು ಪ್ರಧಾನ ಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನ ಸೇರಿದಂತೆ ವಿವಿಧ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆಯಡಿ, ೫೫ ಕೋಟಿಗೂ ಹೆಚ್ಚು ಫಲಾನುಭವಿಗಳು ವಾರ್ಷಿಕವಾಗಿ ಪ್ರತಿ ಕುಟುಂಬಕ್ಕೆ ೫ ಲಕ್ಷ ರೂಪಾಯಿಗಳ ಆರೋಗ್ಯ ವಿಮೆಯನ್ನು ಹೊಂದಿದ್ದಾರೆ. ಇಲ್ಲಿಯವರೆಗೆ ೪೦ ಕೋಟಿ ಆಯುಷ್ಮಾನ್ ಕಾರ್ಡ್‌ಗಳನ್ನು ಈ ಯೋಜನೆಯಡಿ ನೀಡಲಾಗಿದೆ. ಇದಲ್ಲದೆ, ಜನರಿಗೆ ಸಮಗ್ರ ಪ್ರಾಥಮಿಕ ಆರೋಗ್ಯ ಸೇವೆ ಒದಗಿಸಲು, ದೇಶದಲ್ಲಿ ೧ ಲಕ್ಷ ೭೬ ಸಾವಿರ ಆಯುಷ್ಮಾನ್ ಆರೋಗ್ಯ ಮಂದಿರಗಳು ಕಾರ್ಯನಿರ್ವಹಿಸುತ್ತಿವೆ.

<><><><>

ಜಮ್ಮು ಪ್ರದೇಶದಲ್ಲಿ ಭಯೋತ್ಪಾದನೆಗೆ ಸಂಬಂಧಿಸಿದ ಪರಿಸ್ಥಿತಿಯನ್ನು ಶೀಘ್ರದಲ್ಲೇ ನಿಯಂತ್ರಣಕ್ಕೆ ತರಲಾಗುವುದು ಎಂದು ಬಿಜೆಪಿ ಶಾಸಕರು ಮತ್ತು ಪಕ್ಷದ ಹಿರಿಯ ನಾಯಕರಿಗೆ, ಕೇಂದ್ರ ಗೃಹ ಸಚಿವ ಅಮಿತ್ ಶಾ ಭರವಸೆ ನೀಡಿದ್ದಾರೆ. ಜಮ್ಮು ಮತ್ತು ಕಾಶ್ಮೀರಕ್ಕೆ ರಾಜ್ಯ ಸ್ಥಾನಮಾನ ನೀಡುವುದರ ಕುರಿತು ಕೇಂದ್ರ ಸರ್ಕಾರದ ನಿಲುವನ್ನು ಪುನರುಚ್ಚರಿಸಿದ ಅವರು, ಸೂಕ್ತ ಸಮಯದಲ್ಲಿ ಅದನ್ನು ಪುನಃಸ್ಥಾಪಿಸಲಾಗುವುದು ಎಂದರು. ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್ ಅವರ ಸಮ್ಮುಖದಲ್ಲಿ ತ್ರಿಕೂಟ ನಗರದಲ್ಲಿರುವ ಪಕ್ಷದ ಪ್ರಧಾನ ಕಚೇರಿಯಲ್ಲಿ ಎಲ್ಲಾ ೨೮ ಬಿಜೆಪಿ ಶಾಸಕರೊಂದಿಗೆ ಅವರು ನಿನ್ನೆ, ಎರಡು ಗಂಟೆಗಳ ಕಾಲ ಸಭೆ ನಡೆಸಿದರು. ಭದ್ರತಾ ಪರಿಸ್ಥಿತಿಯನ್ನು ಪರಿಶೀಲಿಸಲು, ಭದ್ರತಾ ಸಿಬ್ಬಂದಿಯೊಂದಿಗೆ ಸಂವಹನ ನಡೆಸಲು ಹಾಗೂ ಕೇಂದ್ರಾಡಳಿತ ಪ್ರದೇಶದಲ್ಲಿ ವಾಸ್ತವಿಕವಾಗಿ ಬಹುಕೋಟಿ ಯೋಜನೆಗಳ ಉದ್ಘಾಟನೆ ಮತ್ತು ಅಡಿಪಾಯ ಹಾಕಲು ಮತ್ತು ಅಭಿವೃದ್ಧಿ ಕಾರ್ಯಗಳ ಪ್ರಗತಿಯನ್ನು ಪರಿಶೀಲಿಸಲು, ತಾಂತ್ರಿಕ ವಿಮಾನ ನಿಲ್ದಾಣಕ್ಕೆ ಬಂದಿಳಿದ ಸಚಿವರನ್ನು ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ, ಹಿರಿಯ ಬಿಜೆಪಿ ನಾಯಕರು ಮತ್ತು ಆಡಳಿತದ ಉನ್ನತ ಅಧಿಕಾರಿಗಳು ಬರಮಾಡಿಕೊಂಡರು.

ಜಮ್ಮು ಮತ್ತು ಕಾಶ್ಮೀರ ವಿಭಾಗಗಳಲ್ಲಿ ಅವರು ಇಂದು ಅಂತರರಾಷ್ಟ್ರೀಯ ಗಡಿ ಪ್ರವಾಸ ಮಾಡಲಿದ್ದು, ಅಲ್ಲಿನ ಪರಿಸ್ಥಿತಿಯನ್ನು ನಿರ್ಣಯಿಸಲು ಕಥುವಾ ಜಿಲ್ಲೆಯ ಬಿಎಸ್ಎಫ್ ಗಡಿ ಹೊರ ಠಾಣೆ ವಿನಯ್‌ಗೆ ಭೇಟಿ ನೀಡಲಿದ್ದಾರೆ.

ಉಗ್ರರ ವಿರುದ್ಧ ಹೋರಾಡಿ ಮಡಿದ ಜೆ & ಕೆ ಪೊಲೀಸ್ ಹುತಾತ್ಮರ ಕುಟುಂಬ ಸದಸ್ಯರನ್ನು ಜಮ್ಮುವಿನ ರಾಜಭವನದಲ್ಲಿ ಮಧ್ಯಾಹ್ನ ೨ ಗಂಟೆಗೆ ಅವರು, ಭೇಟಿ ಮಾಡಲಿದ್ದಾರೆ.

<><><><>

ಪ್ರಧಾನಿ ನರೇಂದ್ರ ಮೋದಿ ಥೈಲ್ಯಾಂಡ್ ಮತ್ತು ಶ್ರೀಲಂಕಾಕ್ಕೆ ತಮ್ಮ ಯಶಸ್ವಿ ಭೇಟಿ ಮುಗಿಸಿ, ನಿನ್ನೆ ರಾತ್ರಿ ನವದೆಹಲಿಗೆ ಹಿಂತಿರುಗಿದ್ದಾರೆ. ತಮ್ಮ ಪ್ರವಾಸದ ಮೊದಲ ಹಂತದಲ್ಲಿ, ಅವರು ೬ನೇ ಬಿಮ್‌ಸ್ಟೆಕ್ ಶೃಂಗಸಭೆಯಲ್ಲಿ ಭಾಗವಹಿಸಲು, ಥೈಲ್ಯಾಂಡ್‌ನ ಬ್ಯಾಂಕಾಕ್ ಗೆ ಭೇಟಿ ನೀಡಿದ್ದರು. ಬಳಿಕ, ಶ್ರೀಲಂಕಾ ಅಧ್ಯಕ್ಷ ಅನುರ ಕುಮಾರ ದಿಸ್ಸಾನಾಯಕೆ ಅವರ ಆಹ್ವಾನದ ಮೇರೆಗೆ ಕೊಲಂಬೊಗೆ ಭೇಟಿ ನೀಡಿದ್ದರು. ನವದೆಹಲಿ ತಲುಪುವ ಮೊದಲು, ಪ್ರಧಾನಿ, ತಮಿಳುನಾಡಿಗೆ ಭೇಟಿ ನೀಡಿ, ರಾಮೇಶ್ವರಂನಲ್ಲಿ ಹೊಸದಾಗಿ ನಿರ್ಮಿಸಲಾದ, ಪಂಬನ್ ರೈಲ್ವೆ ಸೇತುವೆಯನ್ನು ಉದ್ಘಾಟಿಸಿದರು. ಬಳಿಕ, ತಮಿಳುನಾಡಿನಲ್ಲಿ ೮ ಸಾವಿರದ ೩೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ರೈಲ್ವೇ ಮತ್ತು ರಸ್ತೆ ಯೋಜನೆಗಳಿಗೆ ಪ್ರಧಾನಿ ಶಿಲಾನ್ಯಾಸ ನೆರವೇರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಪ್ರಧಾನಿ, ವಿಕಸಿತ ಭಾರತಕ್ಕೆ ತಮಿಳುನಾಡಿನ ಕೊಡುಗೆ ಅಪಾರವಾಗಿದೆ. ರಾಜ್ಯದ ಮೂಲಸೌಕರ್ಯಾಭಿವೃದ್ಧಿಗಾಗಿ ಕೇಂದ್ರದಿಂದ ನೀಡುವ ಅನುದಾನವನ್ನು ಮೂರು ಪಟ್ಟು ಹೆಚ್ಚಿಸಲಾಗಿದೆ ಎಂದರು.

ಧ್ವನಿ : ಪ್ರಧಾನಿ ನರೇಂದ್ರ ಮೋದಿ (೨೮ ಸೆಕೆಂಡ್ಸ್)

<><><><>

ಉಜ್ಬೇಕಿಸ್ತಾನ್‌ನ ತಾಷ್ಕೆಂಟ್‌ನಲ್ಲಿ ನಡೆಯುತ್ತಿರುವ ೧೫೦ನೇ ಅಂತರ-ಸಂಸದೀಯ ಒಕ್ಕೂಟ-ಐಪಿಯು ಶೃಂಗಸಭೆಯ ಸಂದರ್ಭದಲ್ಲಿ ಲೋಕಸಭಾಧ್ಯಕ್ಷ ಓಂ ಬಿರ್ಲಾ ನಿನ್ನೆ, ವಿಯೆಟ್ನಾಂನ ಸಹವರ್ತಿ ಟ್ರಾನ್ ಥಾನ್ ಮಾನ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಇತ್ತೀಚಿನ ವರ್ಷಗಳಲ್ಲಿ ಬಲಗೊಂಡಿರುವ, ಎರಡೂ ದೇಶಗಳ ನಡುವಿನ ನಿಕಟ ಸಾಂಸ್ಕೃತಿಕ ಮತ್ತು ಐತಿಹಾಸಿಕ ಸಂಬಂಧಗಳನ್ನು ಒತ್ತಿ ಹೇಳಿದ ಓಂಬಿರ್ಲಾ, ಎರಡೂ ದೇಶಗಳು ಸುಸ್ಥಿರ ಅಭಿವೃದ್ಧಿಯತ್ತ ಮುನ್ನಡೆಯುತ್ತಿವೆ ಎಂದು ತಿಳಿಸಿದರು.

ರಕ್ಷಣೆ, ತಂತ್ರಜ್ಞಾನ, ಮೂಲಸೌಕರ್ಯ ಮತ್ತು ಪರಮಾಣು ಇಂಧನದಂತಹ ವಿವಿಧ ಕ್ಷೇತ್ರಗಳಲ್ಲಿನ ಸಹಕಾರವು, ಉಭಯ ದೇಶಗಳಿಗೆ ಭವಿಷ್ಯದ ಚೌಕಟ್ಟುಗಳನ್ನು ರೂಪಿಸಲು ಸಹಾಯ ಮಾಡಿದೆ ಎಂದು ಲೋಕಸಭಾ ಸ್ಪೀಕರ್ ಹೇಳಿದರು.

<><><>

ಉತ್ತರಾಖಂಡದ ಡೆಹ್ರಾಡೂನ್‌ನಲ್ಲಿ ಎರಡು ದಿನಗಳ ಚಿಂತನ ಶಿಬಿರ ೨೦೨೫ ಅನ್ನು ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ ಇಂದಿನಿಂದ ಆಯೋಜಿಸುತ್ತಿದೆ. ಶಿಬಿರದ ಅಧ್ಯಕ್ಷತೆಯನ್ನು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವ ಡಾ. ವೀರೇಂದ್ರ ಕುಮಾರ್ ವಹಿಸಲಿದ್ದಾರೆ. ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಬಲೀಕರಣಕ್ಕೆ ಇರುವ ಅಡೆತಡೆಗಳನ್ನು ನಿವಾರಿಸುವ ಮೂಲಕ ನ್ಯಾಯಯುತ ಮತ್ತು ಎಲ್ಲರನ್ನೂ ಒಳಗೊಂಡ ಸಮಾಜವನ್ನು ನಿರ್ಮಿಸುವ ಸಚಿವಾಲಯದ ಧ್ಯೇಯವನ್ನು ಸಾಕಾರಗೊಳಿಸುವುದು ಚಿಂತನ ಶಿಬಿರದ ಉದ್ದೇಶವಾಗಿದೆ.

<><><>

ಭಾರತೀಯ ರಿಸರ್ವ್ ಬ್ಯಾಂಕ್‌ನ ಹಣಕಾಸು ನೀತಿ ಸಮಿತಿಯ ೩ ದಿನಗಳ ಸಭೆಯು ಇಂದು ಮುಂಬೈನಲ್ಲಿ ಆರಂಭವಾಗಲಿದೆ. ಪ್ರಮುಖ ಮಾನದಂಡ ಬಡ್ಡಿದರಗಳು ಅಥವಾ ರೆಪೊ ದರಗಳನ್ನು ಈ ಸಭೆಯು ನಿರ್ಧರಿಸುತ್ತದೆ.

ಇದು, ೨೦೨೫-೨೬ರ ಹಣಕಾಸು ವರ್ಷದ ಮೊದಲ ಹಣಕಾಸು ನೀತಿ ಸಭೆಯಾಗಿದ್ದು, ಬುಧವಾರ ಘೋಷಿಸಲಿರುವ ಕೇಂದ್ರ ಬ್ಯಾಂಕ್‌ನ ಪ್ರಮುಖ ಸಾಲ ದರಗಳ ಫಲಿತಾಂಶವನ್ನು ನಿರ್ಧರಿಸುತ್ತದೆ.

<><><>

ಹೈದರಾಬಾದ್‌ನಲ್ಲಿ ನಿನ್ನೆ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ತಂಡ, ಸನ್‌ರೈಸರ್ಸ್ ಹೈದರಾಬಾದ್ ತಂಡವನ್ನು ಏಳು ವಿಕೆಟ್‌ಗಳಿಂದ ಸೋಲಿಸಿದೆ. ಹೈದರಾಬಾದ್ ತಂಡ ಒಡ್ಡಿದ ೧೫೩ ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಗುಜರಾತ್ ಟೈಟಾನ್ಸ್, ೧೬.೪ ಓವರ್‌ಗಳಲ್ಲಿ ಮೂರು ವಿಕೆಟ್ ನಷ್ಟಕ್ಕೆ ೧೫೩ ರನ್ ಗಳಿಸಿ ಗೆಲುವಿನ ನಗೆ ಬೀರಿತು. ಗುಜರಾತ್ ಟೈಟಾನ್ಸ್ ಪರ ನಾಯಕ ಶುಭ್ಮನ್ ಗಿಲ್ ಅಜೇಯ ೬೧ ರನ್ ಗಳಿಸಿದರು. ಸನ್‌ರೈಸರ್ಸ್ ಹೈದರಾಬಾದ್ ಪರ ಮೊಹಮ್ಮದ್ ಶಮಿ ಎರಡು, ಪ್ಯಾಟ್ ಕಮ್ಮಿನ್ಸ್ ಒಂದು ವಿಕೆಟ್ ಪಡೆದರು.

ಇದಕ್ಕೂ ಮೊದಲು, ಟಾಸ್ ಗೆದ್ದ ಗುಜರಾತ್ ಟೈಟಾನ್ಸ್ ತಂಡ, ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿತು. ಮೊದಲು ಬ್ಯಾಟಿಂಗ್ ಮಾಡಿದ ಸನ್‌ರೈಸರ್ಸ್ ನಿಗದಿತ ೨೦ ಓವರ್‌ಗಳಲ್ಲಿ, ೮ ವಿಕೆಟ್ ನಷ್ಟಕ್ಕೆ, ೧೫೨ ರನ್ ಗಳಿಸಿತು. ಗುಜರಾತ್ ಟೈಟಾನ್ಸ್ ಪರ ಮೊಹಮ್ಮದ್ ಸಿರಾಜ್ ನಾಲ್ಕು ವಿಕೆಟ್ ಪಡೆದರೆ, ಸಾಯಿ ಕಿಶೋರ್ ಮತ್ತು ಪ್ರಸಿದ್ಧ್ ಕೃಷ್ಣ ತಲಾ ಎರಡು ವಿಕೆಟ್ ಪಡೆದರು. ಮೊಹಮ್ಮದ್ ಸಿರಾಜ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ಇಂದು ಮುಂಬೈ ಇಂಡಿಯನ್ಸ್ ತಂಡ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಎದುರಿಸಲಿದೆ. ಪಂದ್ಯ ಸಂಜೆ ೭:೩೦ ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>